ಕರ್ನಾಟಕ ವಿಧಾನ ಪರಿಷತ್ತು

ಲಘು ಪ್ರಕಟಣೆ ಭಾಗ – 2

(ಸಾಂಸದಿಕ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದ ಸಾಮಾನ್ಯ ಮಾಹಿತಿ)

ಶುಕ್ರವಾರ, ದಿನಾಂಕ:22ನೇ ಮಾರ್ಚ್, 2024

ಸಂಖ್ಯೆ:19

ಭಾರತ ಚುನಾವಣಾ ಆಯೋಗವು ಲೋಕಸಭಾ ಚುನಾವಣೆಯ ಪ್ರಯುಕ್ತ ದಿನಾಂಕ:16.03.2024ರಂದು ಚುನಾವಣಾ ವೇಳಾಪಟ್ಟಿಯನ್ನು ಪ್ರಕಟಪಡಿಸಿ, ತಕ್ಷಣದಿಂದಲೇ ನೀತಿಸಂಹಿತೆಯು ಜಾರಿಗೆ ಬರುತ್ತದೆಂದು ತಿಳಿಸಿರುವ ಹಿನ್ನೆಲೆಯಲ್ಲಿ, ದಿನಾಂಕ:21.03.2024ರಿಂದ ಚುನಾವಣಾ ಪ್ರಕ್ರಿಯೆಯು ಮುಕ್ತಾಯಗೊಳ್ಳುವವರೆಗೂ ವಿಧಾನಮಂಡಲದ/ವಿಧಾನಸಭೆಯ ವಿವಿಧ ಸ್ಥಾಯಿ ಸಮಿತಿಗಳ ಸಭೆಯನ್ನು ನಡೆಸದಿರಲು ವಿಧಾನಸಭೆಯ ಮಾನ್ಯ ಸಭಾಧ್ಯಕ್ಷರು ನಿರ್ದೇಶಿಸಿರುತ್ತಾರೆ. ಉಭಯ ಸಚಿವಾಲಯಗಳಲ್ಲಿ ಏಕರೂಪತೆಯನ್ನು ಕಾಯ್ದುಕೊಳ್ಳಬೇಕಾಗಿರುವುದರಿಂದ, ವಿಧಾನ ಪರಿಷತ್ತಿನ ವಿವಿಧ ಸ್ಥಾಯಿ ಸಮಿತಿಗಳ ಸಭೆಯನ್ನು ದಿನಾಂಕ:22.03.2024ರಿಂದ ಚುನಾವಣಾ ಪ್ರಕ್ರಿಯೆ ಮುಕ್ತಾಯಗೊಳ್ಳುವವರೆಗೂ ಸಹ ನಡೆಸಬಾರದೆಂದು ಮಾನ್ಯ ಸಭಾಪತಿಗಳು ನಿರ್ದೇಶಿಸಿರುತ್ತಾರೆಂದು ಈ ಮೂಲಕ ಎಲ್ಲಾ ಮಾನ್ಯ ಶಾಸಕರುಗಳಿಗೆ ತಿಳಿಯಪಡಿಸಲಾಗಿದೆ.

ಕೆ.ಆರ್. ಮಹಾಲಕ್ಷ್ಮಿ
ಕಾರ್ಯದರ್ಶಿ,
ಕರ್ನಾಟಕ ವಿಧಾನ ಪರಿಷತ್ತು.

ವಿಧಾನ ಪರಿಷತ್ತಿನ ಮಾನ್ಯ ಶಾಸಕರುಗಳಿಗೆ.